# ಕನ್ನಡ ಸಾಹಿತ್ಯ ಪರಿಷತ್ತು

ಪಂಪ ಮಹಾಕವಿ ರಸ್ತೆ, ಚಾಮರಾಜಪೇಟೆ, ಬೆಂಗಳೂರು – ೫೬೦ ೦೧೮
ದೂರವಾಣಿ : ೦೮೦ ೨೬೬೧೨೯೯೧, ೨೬೬೨೩೫೮೪ ಫ್ಯಾಕ್ಸ್ : ೨೬೫೨೩೮೬೭
http://www.kasapa.in e-mail : kannadaparishattu@gmail.com


---

ಕ್ರಮಸಂಖ್ಯೆ : ಕಸಾಪ / **ಪ್ರಕಟಣೆ** / ೨೦೨೨-೨೩ ದಿನಾಂಕ : ೧೫-೦೮-೨೦೨೨

*ಇವರಿಗೆ*

**ಸಂಪಾದಕರು / ಮುಖ್ಯ ವರದಿಗಾರರುಕಕ**

.................................................ಬೆಂಗಳೂರು

## ಪ್ರಕಟಣೆ ಕೃಪೆಗಾಗಿ ಹಾಗೂ ಮಾಧ್ಯಮ ಆಹ್ವಾನ

ನಿರ್ಮಾಣಗೊಂಡು ೬೦ ವರ್ಷಗಳ ನಂತರ **ಕನ್ನಡ ಸಾಹಿತ್ಯ ಪರಿಷತ್ತಿನ ‘ಶ್ರೀ ಕೃಷ್ಣರಾಜ ಪರಿಷತ್ತು ಮಂದಿರ’** ಸಂಪೂರ್ಣ ನವೀಕರಣಗೊಂಡಿದೆ. ಆಧುನಿಕ ಕಾಲಘಟ್ಟಕ್ಕೆ ತಕ್ಕಂತೆ ಹವಾನಿಯಂತ್ರಿತ ಸಭಾಂಗಣ, ಸುಸಜ್ಜಿತ ಆಸನ ವ್ಯವಸ್ಥೆ, ಸಮರ್ಪಕ ಧ್ವನಿ, ಬೆಳಕಿನ ವಿನ್ಯಾಸ ಹೀಗೆ ಹೊಸ ಕಾಲಘಟ್ಟಕ್ಕೆ ತಕ್ಕಂತೆ ರೂಪುಗೊಂಡಿದೆ. ಇಂಥಹ ಐತಿಹಾಸಿಕ ಕಟ್ಟಡದ ನವೀನ ರೂಪವನ್ನು **ನಾಳೆ ೧೯ ಅಗಸ್ಟ್ ೨೦೨೨ರ ಶುಕ್ರವಾರ ಸಂಜೆ ೫ ಗಂಟೆಗೆ ನಾಡಿನ ಮುಖ್ಯಮಂತ್ರಿ ಶ್ರೀ ಬಸವರಾಜ ಬೊಮ್ಮಾಯಿಯವರು** ಲೋಕಾರ್ಪಣೆ ಮಾಡಲಿದ್ದಾರೆ.

ಕಾರ್ಯಕ್ರಮದ ಅಧ್ಯಕ್ಷತೆಯನ್ನು **ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ನಾಡೋಜ ಡಾ. ಮಹೇಶ ಜೋಶಿ** ವಹಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ **ಕಂದಾಯ ಸಚಿವರಾದ ಶ್ರೀ ಆರ್. ಅಶೋಕ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಚಿವರಾದ ಶ್ರೀ ವಿ ಸುನೀಲ್ ಕುಮಾರ್, ಪ್ರೌಢ ಶಿಕ್ಷಣ ಇಲಾಖೆ ಸಚಿವರಾದ ಶ್ರೀ ಬಿ.ಸಿ. ನಾಗೇಶ್** ಅವರು ಭಾಗವಹಿಸಲಿದ್ದಾರೆ. ವಿಶೇಷ ಅಥಿತಿಗಳಾಗಿ **ಜ್ಞಾನಪೀಠ ಪ್ರಶಸ್ತಿ ಪುರಸ್ಕೃತ ಹಿರಿಯ ಸಾಹಿತಿ ಡಾ. ಚಂದ್ರಶೇಖರ ಕಂಬಾರ, ಹಿರಿಯ ಸಾಹಿತಿ ನಾಡೋಜ ಡಾ. ಕಮಲಾ ಹಂಪನಾ, ೮೬ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ನಿಯೋಜಿತ ಅಧ್ಯಕ್ಷರಾದ ಹಿರಿಯ ಸಾಹಿತಿ ಡಾ. ದೊಡ್ಡರಂಗೇಗೌಡ** ಅವರು ಭಾಗವಹಿಸಲಿದ್ದಾರೆ.

ಕನ್ನಡಿಗರ ಹೆಮ್ಮೆಯ ಕನ್ನಡ ಸಾಹಿತ್ಯ ಪರಿಷತ್ತಿನ ಶ್ರೀ ಕೃಷ್ಣರಾಜೇಂದ್ರ ಪರಿಷತ್ತಿನ ಮಂದಿರ ಹಾಗೂ ಆವರಣ ನವೀಕರಣ ಕಟ್ಟಡದ ಲೋಕಾರ್ಪಣೆ ಕಾರ್ಯಕ್ರಮಕ್ಕೆ ಕನ್ನಡಾಭಿಮಾನಿಗಳು, ಸಹೃದಯಿ ಕನ್ನಡಿಗರೆಲ್ಲರೂ ಭಾಗವಹಿಸುವಂತೆ **ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ನಾಡೋಜ ಡಾ. ಮಹೇಶ ಜೋಶಿ** ಆದರದ ಆಮಂತ್ರಣ ನೀಡಿದ್ದಾರೆ.

**ಎಲ್ಲರ ಸಮಯಕ್ಕೆ ಗೌರವ ಕೊಟ್ಟು ನಿಗದಿತ ಸಮಯಕ್ಕೆ ಕಾರ್ಯಕ್ರಮ ಆರಂಭವಾಗಲಿದೆ. ತಮ್ಮ ವರದಿಗಾರರನ್ನು ಹಾಗೂ ಛಾಯಾಚಿತ್ರಗಾರರನ್ನು ದಿನಾಂಕ ೧೯ ಅಗಸ್ಟ್ ೨೦೨೨ರ ಶುಕ್ರವಾರ ಸಂಜೆ ೫ ಗಂಟೆಗೆ ಕಳುಹಿಸಬೇಕಾಗಿ ವಿನಂತಿ.**

ವಿ.ಸೂ - ಮಾಧ್ಯಮ ಆಹ್ವಾನದೊಂದಿಗೆ ಆಮಂತ್ರಣ ಪತ್ರಕೆ ಲಗತಿಸಿದೆ.

**ಶ್ರೀನಾಥ ಜೆ.**
ಮಾಧ್ಯಮ ಸಲಹೆಗಾರರು
ಕನ್ನಡ ಸಾಹಿತ್ಯ ಪರಿಷತ್ತಿನ ಬೆಂಗಳೂರು